38

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷ್ಣಾಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ಆಲಮಟ್ಟಿಗೆ ಸ್ಥಳಾಂತರಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಅಧಿಸೂಚನೆ ಸಂಖ್ಯೆ ಪಿ.ಡಿ. 75 ಯೋಪರ 2018, ದಿನಾಂಕ: 10.01.2019.

********

**ಪ್ರಸ್ತಾವನೆ:**

1. ಮೇಲೆ ಓದಲಾದ ದಿನಾಂಕ: 10.01.2019ರ ಅಧಿಸೂಚನೆಯಲ್ಲಿ ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಆ ಭಾಗದ ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಕರ್ನಾಟಕ ಸರ್ಕಾರದ 9 ಕಛೇರಿಗಳನ್ನು ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ವರ್ಗಾಯಿಸಲಾಗಿದ್ದು, ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕೃಷ್ಣಾಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ಆಲಮಟ್ಟಿಗೆ ವರ್ಗಾಯಿಸಲಾಗಿದೆ.

2. ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತವು ಕರ್ನಾಟಕ ಸರ್ಕಾರದ ಪೂರ್ಣ ಸ್ವಾಮ್ಯತೆಯನ್ನು ಹೊಂದಿರುವ ಸಂಸ್ಥೆಯಾಗಿದ್ದು, ಅಗಸ್ಟ 19,1994ರಂದು ಕಂಪನಿ ಕಾಯ್ದೆ 1956ರ ಅನುಸಾರ ಸ್ಥಾಪಿಸಲಾಗಿದೆ. ಕೃಷ್ಣಾ ಮೇಲ್ದಂಡೆ ಯೋಜನೆ ಮತ್ತು ಅದಕ್ಕೆ ಸಂಬಂಧಿಸಿದಂತೆ ಎಲ್ಲಾ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ಈ ನಿಗಮದ ಉದ್ದೇಶವಾಗಿದೆ. ಇದರ ಆಡಳಿತ ಕಛೇರಿಯು ವಿಜಯಪುರ ಜಿಲ್ಲೆ, ಬಸವನಬಾಗೇವಾಡಿ ತಾಲ್ಲೂಕಿನ ಆಲಮಟ್ಟಿಯಲ್ಲಿ 1994ರಿಂದ ಕಾರ್ಯನಿರ್ವಹಿಸುತ್ತಿದೆ.

3. ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಆ ಭಾಗದ ಕೃಷ್ಣಾ ಭಾಗ್ಯ ಜಲ ನಿಗಮ ನಿಗಮದ ನೀರಾವರಿ ಯೋಜನೆಗಳ ಅನುಷ್ಠಾನದ ಹಿತದೃಷ್ಟಿಯಿಂದ, ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಅನುವಾಗುವಂತೆ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕೃಷ್ಣಾಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ಆಲಮಟ್ಟಿಗೆ ಸ್ಥಳಾಂತರಿಸಲು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 333ಎಸ್ಎ.ಎಸ್ 2021**
**ಬೆಂಗಳೂರು, ದಿನಾಂಕ:30.10.2021.**

4. ಸರ್ಕಾರದ ನೀತಿಯಂತೆ ಆಡಳಿತಾತ್ಮಕಹಾಗೂ ಸಾರ್ವಜನಿಕಹಿತದೃಷ್ಟಿಯಿಂದ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕೃಷ್ಣಾಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು ಕಛೇರಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಆಲಮಟ್ಟಿಗೆ ಅಧಿಕಾರಿ / ಸಿಬ್ಬಂದಿಗಳ ಸಮೇತ ಸ್ಥಳಾಂತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮಂಜುನಾಥ್ ಹೆಚ್.ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).